# ಕರ್ನಾಟಕ ಸರ್ಕಾರದ ನಡವಳಿಗಳು

ಸಂ 42
ದಿನಾಂಕ 16-1-2021

**ವಿಷಯ :** M/s Sitac Management & Development Private Limited ಕಂಪನಿಯವರಿಗೆ ಕೊಪ್ಪಳ ಜಿಲ್ಲೆಯ, ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :** 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ:KREDL/08/SM&DPL-40 MW/ Yelaburga/Koppal/F-1938/2020/2962, ದಿನಾಂಕ:10.08.2020

2) ಸರ್ಕಾರದ ದಿನಾಂಕ:29.09.2020 ರ ಹಂಚಿಕೆ ಸಮಿತಿ ಸಭೆ.

**ಪ್ರಸ್ತಾವನೆ :-**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Sitac Management & Development Private Limited ರವರು ಕೊಪ್ಪಳ ಜಿಲ್ಲೆಯ, ಯಲಬುರ್ಗಾ ತಾಲ್ಲೂಕಿನ ಹಿರೇಹಂಚಿನಾಳ, ಹಳ್ಳಿಗುಡಿ, ಹರಲಾಪುರ, ಸೋಮಪುರ, ಸಿದ್ನೇಕೊಪ್ಪ, ಮಂಡಲಗೇರಿ, ಮಲೇಕೊಪ್ಪ ಮತ್ತು ಅನುಕೊಂಡನಕೊಪ್ಪ ಗ್ರಾಮಗಳಲ್ಲಿ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕ್ರೆಡಲ್‌ಗೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಕೆಪಿಟಿಸಿಎಲ್‌ನೊಂದಿಗೆ ವ್ಹೀಲಿಂಗ್ ಒಡಂಬಡಿಕೆ ಮಾಡಿಕೊಳ್ಳುವ ಮೂಲಕ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

M/s Sitac Management & Development Private Limited ಕಂಪನಿಯವರು 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆಗಾಗಿ ಕೋರಿರುವ ಸ್ಥಳದಲ್ಲಿ ಈಗಾಗಲೇ M/s Coastal Consolidated Structures Pvt.Ltd., ಕಂಪನಿಯವರಿಗೆ ದಿನಾಂಕ:15.09.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ 3.4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ತಾತ್ವಿಕ ಅನುಮೋದನೆ ನೀಡಲು ಶಿಫಾರಸ್ಸುಗೊಂಡು, ದಿನಾಂಕ:06.03.2018ರ ತಾತ್ವಿಕ ಅನುಮೋದನೆ ಪತ್ರವನ್ನು ಎರಡು ವರ್ಷಗಳಲ್ಲಿ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸುವ ಷರತ್ತಿಗೊಳಪಟ್ಟು ನೀಡಲಾಗಿರುವುದಾಗಿ ತದನಂತರ, ಸದರಿ ಕಂಪನಿಯವರ ದಿನಾಂಕ:17.02.2020 ರಂದು ತಾತ್ವಿಕ ಅನುಮೋದನೆ ನೀಡಿರುವ 3.4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿಯೇ 3.4 ಮೆ.ವ್ಯಾ ಸಾಮರ್ಥ್ಯಕ್ಕೆ ಡಿ.ಪಿ.ಆರ್ ಸಲ್ಲಿಸಿ ಹಂಚಿಕೆ ಆದೇಶ ನೀಡುವಂತೆ ಕೋರಿರುವುದಾಗಿ ಹಾಗೂ M/s Coastal Consolidated Structures Pvt.Ltd.,ರವರ ಪ್ರಸ್ತಾವನೆಯನ್ನು ದಿನಾಂಕ:22.04.2020 ರಂದು ಸರ್ಕಾರಕ್ಕೆ ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, M/s Sitac Management & Development Private Limited ಕಂಪನಿಯವರು ದಿನಾಂಕ:10.07.2020ರ ಪತ್ರದನ್ವಯ ಹಂಚಿಕೆಗಾಗಿ ಕೋರಿರುವ 40 ಮೆ.ವ್ಯಾ ಸಾಮರ್ಥ್ಯದ ಯೋಜನೆಗೆ ಸಂಬಂಧಿಸಿದಂತೆ ಭೂಮಾಲೀಕರೊಂದಿಗೆ ಮಾಡಿಕೊಂಡಿರುವ ATS ದಾಖಲೆಗಳನ್ನು ಸಲ್ಲಿಸಿರುತ್ತಾರೆ. ಸದರಿ ದಾಖಲೆಗಳನ್ವಯ ಅಭಿವೃದ್ಧಿದಾರರು 8 ಗ್ರಾಮಗಳಿಂದ ವಿವಿಧ ಸರ್ವೇ ನಂಬರ್‌ಗಳಲ್ಲಿ 180 ಎಕರೆ ಜಮೀನಿಗೆ RTC ಗಳನ್ನು ಸಲ್ಲಿಸಿದ್ದು, ಅವುಗಳಲ್ಲಿ 80 ಎಕರೆ ಜಮೀನಿಗೆ ಭೂಮಾಲೀಕರೊಂದಿಗೆ ATS ಮಾಡಿಕೊಂಡಿರುವ ದಾಖಲೆಗಳನ್ನು ಸಲ್ಲಿಸಿ, 40 ಮೆ.ವ್ಯಾ ಸಾಮರ್ಥ್ಯಕ್ಕೆ ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

M/s Sitac Management & Development Private Limited ಕಂಪನಿಯು ದಿನಾಂಕ: 28.10.2015ರಂದು ನೋಂದಾವಣೆಗೊಂಡಿದ್ದು, ಇದರ ನೊಂದಾಯಿತ ಕಛೇರಿಯು ಗುಜರಾತಿನ ರಾಜ್ ಕೋಟ್‌ನಲ್ಲಿ ಸ್ಥಾಪಿತಗೊಂಡಿದೆ. ಸದರಿ ಕಂಪನಿಯು M/s EDF Renouvelables SA, France ಕಂಪನಿಯಿಂದ ಸ್ಥಾಪಿತವಾದ SPV ಸಂಸ್ಥೆ ಆಗಿರುತ್ತದೆ. M/s EDF Renouvelables SA, France ಕಂಪನಿಯವರ ನೆಟ್‌ವರ್ತ್ ದಿನಾಂಕ:31.12.2019ರ ಅಂತ್ಯಕ್ಕೆ ರೂ.32,196.04 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ರವರು ದೃಢೀಕರಣ ಪತ್ರವನ್ನು ನೀಡಿರುತ್ತಾರೆ.

ward No.......
Date.......
Sig.......

M/s Sitac Management & Development Private Limited ಕಂಪನಿಯವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸದರಿಯವರು ಈಗಾಗಲೇ M/s Coastal Consolidated Structures Pvt.Ltd.,ರವರಿಗೆ ಗದಗ ಜಿಲ್ಲೆಯ ಗದಗ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ತಾತ್ವಿಕ ಅನುಮೋದನೆ ನೀಡಿರುವ 3.4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿಯೇ 3.4 ಮೆ.ವ್ಯಾ ಸಾಮರ್ಥ್ಯಕ್ಕೆ ಡಿ.ಪಿ.ಆರ್ ಸಲ್ಲಿಸಿ ಹಂಚಿಕೆ ಆದೇಶ ನೀಡುವಂತೆ ಕೋರಿರುವ ಸ್ಥಳದಲ್ಲಿಯೇ, M/s Sitac Management & Development Private Limited ಕಂಪನಿಯವರು 40 ಮೆವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಕೋರಿರುವ ಪ್ರಸ್ತಾವನೆಯನ್ನು ಮುಂದಿನ ಹಂಚಿಕೆ ಸಮಿತಿ ಸಭೆಯಲ್ಲಿ ವಿವರವಾಗಿ ಚರ್ಚಿಸಿ, ನಿರ್ಧರಿಸಬಹುದೆಂಬ ಅಭಿಪ್ರಾಯದೊಂದಿಗೆ, ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Sitac Management & Development Private Limited ಕಂಪನಿಯವರಿಗೆ ಕೊಪ್ಪಳ ಜಿಲ್ಲೆಯ, ಯಲಬುರ್ಗಾ ತಾಲ್ಲೂಕಿನ ಹಿರೇಹಂಚಿನಾಳ, ಹಳ್ಳಿಗುಡಿ, ಹರಲಾಪುರ, ಸೋಮಪುರ, ಸಿದ್ನೇಕೊಪ್ಪ, ಮಂಡಲಗೇರಿ, ಮಲೇಕೊಪ್ಪ ಮತ್ತು ಅನುಕೊಂಡನಕೊಪ್ಪ ಗ್ರಾಮಗಳಲ್ಲಿ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ನೀಡುವ ಪ್ರಸ್ತಾವನೆಯನ್ನು ಸಮಿತಿಯು ಪರಿಶೀಲಿಸಿ, ಇದೇ ಸ್ಥಳದಲ್ಲಿ M/s Coastal Consolidated Structures Private Limited ರವರಿಗೆ ಈಗಾಗಲೇ ಹಂಚಿಕೆ ಮಾಡಿರುವ 3.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಯಾವುದೇ ತೊಂದರೆಯಾಗದಂತೆ, M/s Sitac Management & Development Private Limited ರವರಿಗೆ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ವೀಲಿಂಗ್ ಮುಖಾಂತರ ಮಾರಾಟ ಮಾಡುವ ಷರತ್ತಿಗೊಳಪಟ್ಟು ಸಮಿತಿಯು ಹಂಚಿಕೆಗೆ ಶಿಫಾರಸ್ಸು ಮಾಡಿರುತ್ತದೆ.

**Geographical area description for 40 MW capacity wind power project**

| Sl. No. | Topo Sheet No | Proposed capacity in MW | Near by Villages of the proposed area and district | Geographical area description of the project |
|---|---|---|---|---|
| 1 | 48 M/ 15 | 40 MW (20 Nos X 2000 kw) | Hirehanchehal, Halligudi, Harlapura, Sompura, Shidnekoppa, Mandalgeri, Malekoppa and Anukondanakoppa Villages of Yelaburga Taluk, Koppal District. | The area proposed by M/s Sitac Management & Development Private Limited was already issued facilitation letter for 3.4 MW to M/s Coastal Consolidated Structures Private Limited.<br>Further, as per the request of M/s Coastal Consolidated Structures Private Limited, the proposal sent to GoK for issue of Government Order for 3.4 MW capacity in the same area.<br>M/s Coastal Consolidated Structures Private Limited has not increased capacity while submission of DPR, the area allocated to them is more at the time of issual of facilitation letter.<br>Now, in the same area M/s Sitac Management & Development Private Limited has requested for issue of Government order for 40 MW capacity wind power project to install their WTG;s in latitude and longitude mentioned below and without disturbing the 3.4 MW capacity of M/s Coastal Consolidated Structures Private Limited. |

...3






| | | | | |
|---|---|---|---|---|
| | | | | The proposed area is surrounded by the Points A, B, C, D and are held in the following Geographical co-ordinates as:<br><br>**Point A**:Latitude: 15°25'0"N, Longitude: 75°50'0''E<br>**Point B**:Latitude:15°28'18.86"N, Longitude: 75°50'0''E<br>**Point C**:Latitude:15°28'18.86"N, Longitude: 75°55'0''E<br>**Point D**:Latitude: 15°25'0"N, Longitude: 75°55'0''E<br><br>**Peaks:** 621, 604, 607, 600, 585, 602, 621 and 618 m AMSL |
| | **Total** | **40 MW** | | |

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ 162 ಎನ್‌ಸಿಇ 2020,</u>**
**<u>ಬೆಂಗಳೂರು, ದಿನಾಂಕ :06/01/2021</u>.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Sitac Management & Development Private Limited ಕಂಪನಿಯವರಿಗೆ ಕೊಪ್ಪಳ ಜಿಲ್ಲೆಯ, ಯಲಬುರ್ಗಾ ತಾಲ್ಲೂಕಿನ ಹಿರೇಹಂಚಿನಾಳ, ಹಳ್ಳಿಗುಡಿ, ಹರಲಾಪುರ, ಸೋಮಪುರ, ಸಿದ್ನೇಕೊಪ್ಪ, ಮಂಡಲಗೇರಿ, ಮಲೇಕೊಪ್ಪ ಮತ್ತು ಅನುಕೊಂಡನಕೊಪ್ಪ ಗ್ರಾಮಗಳಲ್ಲಿ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Coastal Consolidated Structures Private Limited ರವರಿಗೆ ಈಗಾಗಲೇ ಹಂಚಿಕೆ ಮಾಡಿರುವ 3.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಯಾವುದೇ ತೊಂದರೆಯಾಗದಂತೆ ಅನುಷ್ಠಾನಗೊಳಿಸುವ ನಿಬಂಧನಗೊಳಪಟ್ಟು ಈ ಕೆಳಕಂಡ ಷರತ್ತು ಹಾಗೂ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಿ ಆದೇಶಿಸಿದೆ.

**Geographical area description for 40 MW capacity wind power project**

| Sl. No. | Topo Sheet No | Proposed capacity in MW | Near by Villages of the proposed area and district | Geographical area description of the project |
|---|---|---|---|---|
| 1 | 48 M/ 15 | 40 MW (20 Nos X 2000 kw) | Hirehanchehal, Halligudi, Harlapura, Sompura, Shidnekoppa, Mandalgeri, Malekoppa and Anukondanakoppa Villages of Yelaburga Taluk, Koppal District. | The area proposed by M/s Sitac Management & Development Private Limited was already issued facilitation letter for 3.4 MW to M/s Coastal Consolidated Structures Private Limited.<br><br>Further, as per the request of M/s Coastal Consolidated Structures Private Limited, the proposal sent to GoK for issue of Government Order for 3.4 MW capacity in the same area.<br><br>M/s Coastal Consolidated Structures Private Limited has not increased capacity while submission of DPR, the area allocated to them is more at the time of issual of facilitation letter. |

...4

| | | | | |
|---|---|---|---|---|
| | | | | Now, in the same area M/s Sitac Management & Development Private Limited has requested for issue of Government order for 40 MW capacity wind power project to install their WTG;s in latitude and longitude mentioned below and without disturbing the 3.4 MW capacity of M/s Coastal Consolidated Structures Private Limited.<br><br>The proposed area is surrounded by the Points A, B, C, D and are held in the following Geographical co-ordinates as:<br><br>**Point A**:Latitude: 15°25'0"N, Longitude: 75°50'0''E<br>**Point B**:Latitude:15°28'18.86"N, Longitude: 75°50'0''E<br>**Point C**:Latitude:15°28'18.86"N, Longitude: 75°55'0''E<br>**Point D**:Latitude: 15°25'0"N, Longitude: 75°55'0''E<br><br>**Peaks:** 621, 604, 607, 600, 585, 602, 621 and 618 m AMSL |
| | **Total** | **40 MW** | | |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ:ಇಎನ್ 435 ಎನ್‌ಸಿಇ 2011, ದಿನಾಂಕ:06.1.2012ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ:ಇಎನ್ 354 ಎನ್‌ಸಿಇ 2008, ದಿನಾಂಕ:19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ:ಇಎನ್ 07 ಎನ್‌ಸಿಇ 2011, ದಿನಾಂಕ:18.07.2011ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನ ಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಅಥವಾ ಸ್ವಂತ ಬಳಕೆಗೆ ಉಪಯೋಗಿಸಿಕೊಳ್ಳಲು ಅನುಮತಿಸಲಾಗಿದೆ. ಈ ಕುರಿತು ಕೆ.ಪಿ.ಟಿ.ಸಿ.ಎಲ್/ಎಸ್ಕಾಂನೊಂದಿಗೆ ವೀಲಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

...5

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ, ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂ ಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕಾ ನೀತಿ 2014-19ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

N. mangalagowri 6/1/2021
(ಎನ್.ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

6/1/20

**ಇವರಿಗೆ:**
ಸಂಕಲನಕಾರರು, ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ / ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ವಿಶಾಸ್ತ್ರ, ಇಲಾಖೆ/ ಕಂದಾಯ ಇಲಾಖೆ/ಬಹುಮಹಡಿ ಕಟ್ಟಡ/ವಿಕಾಸಸೌಧ, ಬೆಂಗಳೂರು-1.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರಗಿ.
6. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
8. ಉಪ ಅರಣ್ಯ ಸಂರಕ್ಷಣಾಧಿಕಾರಿ, ಕೊಪ್ಪಳ ಜಿಲ್ಲೆ, ಕೊಪ್ಪಳ.
9. M/s Sitac Management & Development Private Limited, No.507-508, Ashoka Estate, 24, Bharakhamba Road, New Delhi-110001.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12. ಶಾಖಾ ರಕ್ಷಾ ಕಡತ/ಕಚೇರಿ ಪ್ರತಿ/ ಹೆಚ್ಚುವರಿ ಪ್ರತಿಗಳು.